ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 26/12/2019

# ರೇಸ್‌ಕೋರ್ಸ್ ಲೈಸೆನ್ಸ್ ರದ್ದುಗೊಳಿಸಿ

## ಸುಪ್ರೀಂಕೋರ್ಟ್ ಆದೇಶ ಉಲ್ಲಂಘನೆ। ಸಾರ್ವಜನಿಕ ಲೆಕ್ಕಪತ್ರ ಸಮಿತಿ ಗರಂ ಕ್ಲಬ್‌ಗೆ ನೀಡಿರುವ ಲೈಸೆನ್ಸ್ ರದ್ದು ಮಾಡುವಂತೆ ಆರ್ಥಿಕ ಇಲಾಖೆಗೆ ಸೂಚನೆ


26/12/19

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬೆಂಗಳೂರು 'ಟರ್ಫ್ ಕ್ಲಬ್' ಕುದುರೆ ರೇಸ್ ನಡೆಸಲು ನೀಡಿದ್ದ ಅನುಮತಿ ಉಲ್ಲಂಘನೆ ಮಾಡಿರುವುದು ಹಾಗೂ ಯಥಾಸ್ಥಿತಿ ಕಾಪಾಡುವಂತೆ ಸುಪ್ರೀಂಕೋರ್ಟ್ ನೀಡಿದ್ದ ಆದೇಶ ಮೀರಿ ಚಟುವಟಿಕೆ ನಡೆಸಿರುವ ಹಿನ್ನೆಲೆಯಲ್ಲಿ ತಕ್ಷಣದಿಂದ ಕ್ಲಬ್‌ಗೆ ನೀಡಿರುವ ಲೈಸೆನ್ಸ್ ರದ್ದು ಮಾಡುವಂತೆ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ಆರ್ಥಿಕ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಮಂಗಳವಾರ ವಿಧಾನಸೌಧದಲ್ಲಿ ನಡೆದ ಸಭೆಯ ನಂತರ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಸಮಿತಿಯ ಅಧ್ಯಕ್ಷ ಎಚ್.ಕೆ. ಪಾಟೀಲ್, ಟರ್ಫ್ ಕ್ಲಬ್ ನಿಯಮಬಾಹಿರವಾಗಿ ಚಟುವಟಿಕೆ ನಡೆಸಿರುವ ಬಗ್ಗೆ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಿದ ನಂತರ ತಕ್ಷಣದಿಂದ ನೀಡಿರುವ ಲೈಸೆನ್ಸ್ ರದ್ದು ಮಾಡಲು ಕ್ರಮ ಕೈಗೊಳ್ಳುವಂತೆ ಆರ್ಥಿಕ ಇಲಾಖೆಗೆ ಸೂಚನೆ ನೀಡಲಾಗಿದೆ. ಇಲಾಖೆ ಕಾರ್ಯದರ್ಶಿಗಳು ಹೆಚ್ಚುವರಿ ಮುಖ್ಯಕಾರ್ಯದರ್ಶಿ ಜೊತೆ ಚರ್ಚಿಸಿ ಲೈಸೆನ್ಸ್ ರದ್ದು ಮಾಡುವಂತೆ ಗುರುವಾರ ಮುಖ್ಯಮಂತ್ರಿಗಳಿಗೆ ಶಿಫಾರಸು ಮಾಡಲಿದ್ದಾರೆ. ಮುಖ್ಯಮಂತ್ರಿಗಳು ಈ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

ಟರ್ಫ್ ಕ್ಲಬ್‌ಗೆ ರೇಸ್ ಚಟುವಟಿಕೆ ಸ್ಥಗಿತಗೊಳಿಸುವಂತೆ ಡಿಸೆಂಬರ್ 2ರಂದು ತಿಳಿಸಲಾಗಿತ್ತು. ಆದರೆ ಹಲವಾರು ತಾಂತ್ರಿಕ ಹಾಗೂ ಕಾನೂನು ಕಾರಣಗಳ ಜತೆ ಈ ವಿಷಯ ಕೋರ್ಟ್‌ನಲ್ಲಿ ಇರುವುದರಿಂದ ಚಟುವಟಿಕೆ ಸ್ಥಗಿತಗೊಳಿಸಲು ಸಾಧ್ಯವಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದರು. ಸುಪ್ರೀಂ ಕೋರ್ಟ್ ಯಥಾಸ್ಥಿತಿ ಕಾಪಾಡುವಂತೆ ಆದೇಶಿಸಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಆದರೆ ಕಳೆದ 10 ವರ್ಷಗಳಿಂದ ರೇಸಿಂಗ್ ಚಟುವಟಿಕೆ ನಡೆಸಲು ಲೈಸೆನ್ಸ್ ನೀಡುವ, ನವೀಕರಣ ಮಾಡುತ್ತಿರುವ ಬಗ್ಗೆ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು. ಈ ರೀತಿ ಲೈಸೆನ್ಸ್ ನವೀಕರಣ ಮಾಡುವುದು ಕಾನೂನು ಮತ್ತು ಕೋರ್ಟ್ ಆದೇಶದ ವಿರುದ್ಧವಾಗಿದೆ ಎಂದು ಸಮಿತಿ ಅಭಿಪ್ರಾಯ ಪಟ್ಟಿತು. ಆರ್ಥಿಕ ಇಲಾಖೆ ಪ್ರಧಾನಕಾರ್ಯದರ್ಶಿಗೆ ತಕ್ಷಣ ಲೈಸೆನ್ಸ್ ರದ್ದು ಮಾಡುವಂತೆ ನಿರ್ದೇಶನ ನೀಡಲಾಗಿದೆ ಎಂದರು. ರೇಸ್ ಕೋರ್ಸ್ ಲೈಸೆನ್ಸ್ ಕಾಯ್ದೆ ಪ್ರಕಾರ ನಿಯ ಮ ಉಲ್ಲಂಘಿಸಿ ಚಟುವಟಿಕೆ ಮಾಡಿರುವುದನ್ನು ಪರಿಗಣಿಸಿ ಲೈಸೆನ್ಸ್ ರದ್ದು ಮಾಡಲು ಅವಕಾಶವಿದೆ. ಹಿಂದಿನ ಸರ್ಕಾರ ಟರ್ಫ್ ಕ್ಲಬ್ ಮೇಲೆ ನಡೆಸಿದ ದಾಳಿ, ತನಿಖೆಯಲ್ಲಿ ಗೊತ್ತಾದ ಅಂಶಗಳ ಆಧಾರದ ಮೇಲೆ ಲೈಸೆನ್ಸ್ ರದ್ದು ಮಾಡದೇ ಇರುವುದು ಮಹಾ ಅಪರಾಧ ಆಗುತ್ತದೆ ಎಂದು ಅಧಿಕಾರಿಗಳಿಗೆ ತಿಳಿಸಿ, ತಕ್ಷಣ ಲೈಸೆನ್ಸ್ ರದ್ದು ಮಾಡುವಂತೆ ನಿರ್ದೇಶನ ನೀಡಲಾಗಿದೆ ಎಂದು ಎಚ್.ಕೆ. ಪಾಟೀಲ್ ವಿವರಿಸಿದರು.



### ಸಿಎಂಗೆ ಅಧಿಕಾರ

ಲೈಸೆನ್ಸ್ ರದ್ದು ಮಾಡುವ ಅಧಿಕಾರವನ್ನು ಮುಖ್ಯಮಂತ್ರಿಗಳು ಹೊಂದಿರುವುದರಿಂದ ಈ ಸಂಬಂಧ ಶಿಫಾರಸು ಮಾಡುವಂತೆ ತಿಳಿಸಲಾಗಿದೆ. ಬುಧವಾರ ರಜೆ ಇರುವುದರಿಂದ ಗುರುವಾರ ಶಿಫಾರಸು ಪತ್ರ ಹೋಗಲಿದೆ. ಪತ್ರದ ಆಧಾರದ ಮೇಲೆ ಸಿಎಂಗಳು ಮುಂದಿನ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ಎಚ್.ಕೆ. ಪಾಟೀಲ್ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.